**Kannada** - ಆದರಣೆಯ ಸ್ಕ್ರಿಪ್ಚರ್ಸ್ - **Comfort Scriptures**

2 ಕೊರಿಂಥದವರಿಗೆ 1:2-4 ನಮ್ಮ ತಂದೆಯಾದ ದೇವರಿಂದಲೂ ಕರ್ತನಾದ ಯೇಸು ಕ್ರಿಸ್ತನಿಂದಲೂ ನಿಮಗೆ ಕೃಪೆಯೂ ಶಾಂತಿಯೂ ಆಗಲಿ. 3 ನಮ್ಮ ಕರ್ತನಾದ ಯೇಸು ಕ್ರಿಸ್ತನ ತಂದೆಯೂ ಗಿರುವ ದೇವರೂ ಕನಿಕರವುಳ್ಳ ತಂದೆಯೂ ಸಕಲ ವಿಧವಾಗಿ ಸಂತೈಸುವಾತನೂ ಆಗಿರುವ ದೇವರಿಗೆ ಸ್ತೋತ್ರ. 4 ನಮಗೆ ಸಂಭವಿಸುವ ಎಲ್ಲಾ ಸಂಕಟಗಳಲಿನಮಗೆ ಸಂಭವಿಸುವ ಎಲ್ಲಾ ಸಂಕಟಗಳಲಿ ಆತನು ನಮ್ಮನ್ನು ಸಂತೈಸುತ್ತಾನೆ; ಹೀಗೆ ದೇವರಿಂದ ನಮಗಾಗುವ ಆದರಣೆಯ ಮೂಲಕ ನಾವು ನಾನಾ ವಿಧವಾದ ಸಂಕಟಗಳಲ್ಲಿ ಇರುವವರನ್ನು ಸಂತೈಸು ವದಕ್ಕೆ ಶಕ್ತರಾಗುತ್ತೇವೆ.

ಜ್ಞಾನೋಕ್ತಿಗಳು 15:13 ಸಂತೋಷಪಡುವ ಹೃದ ಯವು ಕಾಂತಿಯುಳ್ಳ ಮುಖಭಾವ ತೋರುವದು; ಹೃದಯ ವೇದನೆಯಿಂದ ಆತ್ಮವು ಕುಂದಿಹೋಗುತ್ತದೆ.

1 ಅರಸುಗಳು 8:66 ಎಂಟನೇ ದಿನದಲ್ಲಿ ಅವನು ಜನರಿಗೆ ಅಪ್ಪಣೆಯನ್ನು ಕೊಟ್ಟನು. ಆಗ ಅವರು ಅರಸನನ್ನು ಆಶೀರ್ವದಿಸಿ ಕರ್ತನು ತನ್ನ ಸೇವಕನಾದ ದಾವೀದನಿ ಗೋಸ್ಕರವೂ ತನ್ನ ಜನರಾದ ಇಸ್ರಾಯೇಲ್ಯರಿಗೋಸ್ಕ ರವೂ ಮಾಡಿದ ಸಮಸ್ತ ಉಪಕಾರದ ನಿಮಿತ್ತ ಸಂತೋಷಪಟ್ಟು ಹೃದಯದಲ್ಲಿ ಆನಂದವುಳ್ಳವರಾಗಿ ತಮ್ಮ ತಮ್ಮ ಡೇರೆಗಳಿಗೆ ಹೋದರು.

1 ಪೂರ್ವಕಾಲವೃತ್ತಾ 16:10 ಆತನ ಪರಿಶುದ್ಧ ನಾಮದಲ್ಲಿ ಹೊಗಳಿಕೊಳ್ಳಿರಿ. ಕರ್ತನನ್ನು ಹುಡುಕುವವರ ಹೃದ ಯವು ಸಂತೋಷಿಸಲಿ.

ಜ್ಞಾನೋಕ್ತಿಗಳು 12:25 ಮನುಷ್ಯನ ಹೃದ ಯದಲ್ಲಿರುವ ಭಾರವು ಅದನ್ನು ಕುಗ್ಗಿಸುವದು; ಒಳ್ಳೆಯ ಮಾತು ಅದನ್ನು ಹಿಗ್ಗುವಂತೆ ಮಾಡುವದು.

ಜ್ಞಾನೋಕ್ತಿಗಳು 13:12 ತಡವಾದ ನಿರೀಕ್ಷೆ ಹೃದಯವನ್ನು ಅಸ್ವಸ್ಥತೆ ಮಾಡುತ್ತದೆ;

ಆಶೆಯು ಸಫಲವಾದರೆ ಅದು ಜೀವಕರವಾದ ವೃಕ್ಷವು.

ಯೆಶಾಯ 30:26 ಇಷ್ಟೇ ಅಲ್ಲದೆ ಕರ್ತನು ತನ್ನ ಜನರ ವ್ರಣವನ್ನು ಕಟ್ಟಿ ಅವರ ಪೆಟ್ಟಿನಗಾಯವನ್ನು ವಾಸಿಮಾಡುವ ದಿನದಲ್ಲಿ ಚಂದ್ರನ ಬೆಳಕು ಸೂರ್ಯನ ಬೆಳಕಿನ ಹಾಗೆಯೂ ಮತ್ತು ಸೂರ್ಯನ ಬೆಳಕು ಏಳರಷ್ಟು ಹೆಚ್ಚಾಗಿ ಏಳು ದಿನಗಳ ಬೆಳಕಿನಂತಾಗುವದು.

ಹೋಶೇ 13:8 ಮರಿಗಳನ್ನು ಕಳೆದುಕೊಂಡ ಕರಡಿಯಂತೆ ನಾನು ಅವರನ್ನು ಎದುರುಗೊಳ್ಳುವೆನು; ಅವರ ಹೃದಯದ ಪೊರೆಯನ್ನು ಹರಿದುಬಿಡುವೆನು. ಅಲ್ಲಿ ನಾನು ಸಿಂಹದ ಹಾಗೆ ಅವರನ್ನು ನುಂಗುವೆನು; ಕಾಡುಮೃಗವು ಅವರನ್ನು ಸೀಳಿಹಾಕುವದು.

1 ಸಮುವೇಲನು 1:8,10 ಆಗ ಅವಳ ಗಂಡನಾದ ಎಲ್ಕಾನನು ಅವಳಿಗೆ--ಹನ್ನಳೇ, ಯಾಕೆ ಅಳುತ್ತೀ? ಯಾಕೆ ತಿನ್ನದೆ ಇದ್ದೀ? ಯಾಕೆ ನಿನ್ನ ಹೃದಯದಲ್ಲಿ ದುಃಖಪಡುತ್ತಿದ್ದೀ? ಹತ್ತು ಮಂದಿ ಕುಮಾರರಿಗಿಂತ ನಾನು ನಿನಗೆ ಉತ್ತಮನಲ್ಲವೋ ಅಂದನು. 10 ಅವಳು ಬಹಳ ಮನಗುಂದಿ ದವಳಾಗಿ ಕರ್ತನನ್ನು ಪ್ರಾರ್ಥಿಸಿ ಅತ್ತಳು.

ಕೀರ್ತನೆಗಳು 25:16,17 ನೀನು ನನ್ನ ಕಡೆಗೆ ತಿರುಗಿ ನನ್ನ ಮೇಲೆ ಕರುಣೆಯಿಡು; ನಾನು ಒಂಟಿಗ ನಾಗಿಯೂ ಬಾಧೆಪಡುವವನಾಗಿಯೂ ಇದ್ದೇನೆ. 17 ನನ್ನ ಮನೋವ್ಯಥೆಗಳು ಹೆಚ್ಚಾಗಿವೆ; ನೀನು ನನ್ನ ಸಂಕಟಗಳೊಳಗಿಂದ ನನ್ನನ್ನು ಹೊರಗೆ ಬರಮಾಡು.

ಕೀರ್ತನೆಗಳು 34:18 ಮುರಿದ ಹೃದಯದವರಿಗೆ ಕರ್ತನು ಸಮೀಪವಾಗಿದ್ದಾನೆ; ಜಜ್ಜಿದ ಆತ್ಮವನ್ನು ರಕ್ಷಿಸುತ್ತಾನೆ.

ಕೀರ್ತನೆಗಳು 38:8 ನಾನು ಬಹಳವಾಗಿ ಜಜ್ಜಲ್ಪಟ್ಟು ಬಲಹೀನನಾಗಿದ್ದೇನೆ; ನನ್ನ ಹೃದಯದ ನರಳುವಿಕೆ ಯಿಂದ ಮೂಲ್ಗುತ್ತೇನೆ.

ಕೀರ್ತನೆಗಳು 55:4 ನನ್ನ ಹೃದಯವು ನನ್ನ ಅಂತ ರಂಗದಲ್ಲಿ ನೊಂದುಕೊಳ್ಳುತ್ತದೆ; ಮರಣದ ಬೆದರಿಕೆ ಗಳು ನನ್ನ ಮೇಲೆ ಬಿದ್ದವೆ.

ಕೀರ್ತನೆಗಳು 61:2,3 ನನ್ನ ಹೃದಯವು ಕುಂದಿಹೋಗಿರಲಾಗಿ, ಭೂಮಿಯ ಕಡೇ ಭಾಗದಿಂದ ನಿನ್ನನ್ನು ಕೂಗುವೆನು; ನನಗಿಂತ ಎತ್ತರ ವಾದ ಬಂಡೆಗೆ ನನ್ನನ್ನು ನಡಿಸು. 3 ನೀನು ನನಗೆ ಆಶ್ರಯವೂ ಶತ್ರುವಿನಿಂದ ತಪ್ಪಿಸುವ ಬಲವಾದ ಬುರುಜೂ ಆಗಿದ್ದೀ;

ಕೀರ್ತನೆಗಳು 62:8 ಎಲ್ಲಾ ಕಾಲದಲ್ಲಿ ಆತನಲ್ಲಿ ಭರವಸ ವಿಡಿರಿ, ಜನರೇ; ನಿಮ್ಮ ಹೃದಯವನ್ನು ಆತನ ಮುಂದೆ ಹೊಯ್ಯಿರಿ; ದೇವರು ನಮಗೆ ಆಶ್ರಯವಾಗಿದ್ದಾನೆ. ಸೆಲಾ.

ಕೀರ್ತನೆಗಳು 73:26 ನನ್ನ ಮಾಂಸವೂ ಹೃದಯವೂ ಕುಂದುತ್ತದೆ; ಆದರೆ ದೇವರು ಯುಗಯುಗಕ್ಕೂ ನನ್ನ ಹೃದಯದ ಬಲವೂ ಪಾಲೂ ಆಗಿದ್ದಾನೆ.

ಕೀರ್ತನೆಗಳು 77:2,3 ನನ್ನ ಇಕ್ಕ ಟ್ಟಿನ ದಿವಸದಲ್ಲಿ ಕರ್ತನನ್ನು ಹುಡುಕಿದೆನು; ನಾನು ರಾತ್ರಿಯೆಲ್ಲಾ ವ್ಯಥೆಪಟ್ಟದ್ದರಿಂದ ನನ್ನ ಪ್ರಾಣವು ಆದರಣೆ ಹೊಂದಲೊಲ್ಲದು. 3 ನಾನು ವ್ಯಥೆಪಡುತ್ತಾ ದೇವರನ್ನು ಜ್ಞಾಪಕಮಾಡಿಕೊಂಡೆನು. ನಾನು ಚಿಂತಿ ಸುವದರಿಂದ ನನ್ನ ಆತ್ಮವು ಬಳಲಿ ಹೋಗಿದೆ ಸೆಲಾ.

ಕೀರ್ತನೆಗಳು 86:11 ಓ ಕರ್ತನೆ, ನಿನ್ನ ಮಾರ್ಗವನ್ನು ನನಗೆ ಬೋಧಿಸು; ನಿನ್ನ ಸತ್ಯದಲ್ಲಿ ನಡೆದುಕೊಳ್ಳುವೆನು; ನಿನ್ನ ಹೆಸರಿಗೆ ಭಯಪಡುವ ಹಾಗೆ ನನ್ನ ಹೃದಯವನ್ನು ಐಕ್ಯಪಡಿಸು.

ಕೀರ್ತನೆಗಳು 109:22 ನಾನು ದೀನನೂ ಬಡವನೂ ಆಗಿದ್ದೇನೆ. ನನ್ನ ಹೃದಯವು ಅಂತರಂಗದಲ್ಲಿ ಗಾಯಗೊಂಡಿದೆ.

ಕೀರ್ತನೆಗಳು 112:7,8 ಅವನು ಕೆಟ್ಟಸುದ್ದಿಗೆ ಭಯಪಡನು; ಅವನ ಹೃದಯವು ಕರ್ತನಲ್ಲಿ ಭರವಸವಿಟ್ಟು ಸ್ಥಿರವಾಗಿದೆ. 8 ಅವನ ಹೃದಯವು ದೃಢವಾಗಿದೆ; ತನ್ನ ವೈರಿಗಳ ಮೇಲೆ ತನ್ನ ಇಷ್ಟವನ್ನು ನೋಡುವ ಮಟ್ಟಿಗೂ ಭಯಪಡನು.

ಕೀರ್ತನೆಗಳು 143:4  ನನ್ನ ಆತ್ಮವು ನನ್ನಲ್ಲಿ ಕುಂದಿಹೋಗಿದೆ; ನನ್ನೊಳಗೆ ನನ್ನ ಹೃದಯವು ಹಾಳಾಗಿದೆ.

ಕೀರ್ತನೆಗಳು 147:3 ಆತನು ಮುರಿದ ಹೃದಯದವರನ್ನು ಸ್ವಸ್ಥಮಾಡಿ ಅವರ ಗಾಯಗಳನ್ನು ಕಟ್ಟುತ್ತಾನೆ.

ಜ್ಞಾನೋಕ್ತಿಗಳು 14:30 ಸ್ವಸ್ಥವಾದ ಹೃದಯವು ದೇಹಕ್ಕೆ ಜೀವ; ಮತ್ಸರವು ಎಲುಬುಗಳಿಗೆ ಕ್ಷಯವು.

ಪ್ರಸಂಗಿ 1:13 ಆಕಾಶದ ಕೆಳಗೆ ನಡೆಯುವ ಎಲ್ಲವುಗಳ ವಿಷಯವಾಗಿ ಜ್ಞಾನ ದಿಂದ ವಿಚಾರಿಸಿ ವಿಮರ್ಶಿಸುವದಕ್ಕೆ ನಾನು ನನ್ನ ಮನಸ್ಸು ಇಟ್ಟೆನು; ಇದರ ವಿಷಯವಾದ ಪ್ರಯಾಸವು ಮನಸ್ಸಿನಲ್ಲಿ ಯೋಚಿಸುವಂತೆ ದೇವರು ಮನುಷ್ಯ ಮಕ್ಕಳಿಗೆ ಈ ಕಷ್ಟಕರವಾದ ಪ್ರಯಾಸವನ್ನು ಕೊಟ್ಟಿ ದ್ದಾನೆ.

ಪ್ರಸಂಗಿ 2:10 ನನ್ನ ಕಣ್ಣುಗಳು ಬಯಸಿದ್ದೆಲ್ಲವನ್ನು ಅವುಗಳಿಂದ ಹಿಂತೆಗೆಯಲಿಲ್ಲ, ಯಾವ ಸಂತೋಷಕ್ಕಾಗಿಯೂ ನನ್ನ ಹೃದಯವನ್ನು ನಾನು ತಡೆಯಲಿಲ್ಲ; ನನ್ನ ಎಲ್ಲಾ ಪ್ರಯಾಸದಲ್ಲಿ ನನ್ನ ಹೃದಯವು ಸಂತೋಷಿಸಿತು; ನನ್ನ ಪ್ರಯಾಸ ದಿಂದೆಲ್ಲಾ ನನಗಾದ ಪಾಲು ಇದೆ.

ಪ್ರಸಂಗಿ 2:22,23 ಸೂರ್ಯನ ಕೆಳಗೆ ತಾನು ಪ್ರಯಾಸ ಪಟ್ಟ ತನ್ನ ಹೃದಯದ ಆಯಾಸಕ್ಕಾಗಿಯೂ ತನ್ನ ಎಲ್ಲಾ ಪ್ರಯಾಸಕ್ಕಾಗಿಯೂ ಮನುಷ್ಯನಿಗೆ ಏನು ಸಿಕ್ಕುತ್ತದೆ?

23 ಅವನ ದಿವಸಗಳೆಲ್ಲಾ ವ್ಯಸನಮಯವೇ, ಅವನ ಪ್ರಯಾಸವು ದುಃಖಮಯವೇ; ಹೌದು, ಅವನ ಹೃದಯವು ರಾತ್ರಿಯಲ್ಲಿ ವಿಶ್ರಾಂತಿತಕ್ಕೊಳ್ಳುವದಿಲ್ಲ. ಇದೂ ಕೂಡ ವ್ಯರ್ಥವೇ.

ಪ್ರಸಂಗಿ 11:10 ಆದಕಾರಣ ನಿನ್ನ ಹೃದಯದಿಂದ ದುಃಖವನ್ನು ತೆಗೆದು ಹಾಕು; ನಿನ್ನ ಶರೀರದಿಂದ ಕೆಟ್ಟದ್ದನ್ನು ತೆಗೆದುಬಿಡು; ಬಾಲ್ಯವೂ ಯೌವನವೂ ವ್ಯರ್ಥವಾಗಿವೆ.

ಯೆಶಾಯ 30:29 ಪರಿಶುದ್ಧ ಹಬ್ಬವನ್ನು ಆಚರಿಸುವ ರಾತ್ರಿಯಲ್ಲಿ ಹೇಗೋ ಹಾಗೆ ನಿಮಗೆ ಹಾಡುವಿರಿ; ಕರ್ತನ ಪರ್ವತಕ್ಕೆ ಇಸ್ರಾಯೇಲಿನ ಬಂಡೆಯ ಬಳಿಗೆ ಬರುವದಕ್ಕೆ ಕೊಳಲಿನ ಸಂಗಡ ಹೋಗುವ ಪ್ರಕಾರ ಹೃದಯದ

ಸಂತೋಷವಿರುವದು.

ಯೆಶಾಯ 57:15 ಉನ್ನತನೂ ಎತ್ತರವಾದವನೂ ನಿತ್ಯವಾಗಿ ವಾಸಿ ಸುವವನೂ ಪರಿಶುದ್ಧನೆಂದು ಹೆಸರುಳ್ಳಾತನೂ ಹೀಗೆ ಹೇಳುತ್ತಾನೆ--ಉನ್ನತವಾದ ಪರಿಶುದ್ಧ ಸ್ಥಳದಲ್ಲಿ ವಾಸಿ ಸುವ ನಾನು ಪಶ್ಚಾತ್ತಾಪದೊಂದಿಗೆ ಮತ್ತು ದೀನನ ಆತ್ಮದೊಂದಿಗೆ ಇದ್ದುಕೊಂಡು ಅವರನ್ನು ಉಜ್ಜೀ ವಿಸುವವನಾಗಿದ್ದೇನೆ.

ಯೆಶಾಯ 65:14 ಇಗೋ, ನನ್ನ ಸೇವಕರು ಹೃದಯದ ಆನಂದದಿಂದ ಹಾಡುವರು, ಆದರೆ ನೀವು ಹೃದಯದ ವ್ಯಸನದಿಂದ ಅಳುವಿರಿ ಮತ್ತು ಮುರಿದ ಆತ್ಮದಿಂದ ಗೋಳಾಡುವಿರಿ.

ಯೆಶಾಯ 66:13,14 ಒಬ್ಬ ನನ್ನು ಅವನ ತಾಯಿ ಆದರಿಸುವ ಪ್ರಕಾರವೇ ನಾನು ನಿಮ್ಮನ್ನು ಆದರಿಸುವೆನು; ಯೆರೂಸಲೇಮಿನಲ್ಲಿ ಆದ ರಣೆ ಹೊಂದುವಿರಿ. 14 ನೀವು ಅದನ್ನು ನೋಡುವಾಗ ನಿಮ್ಮ ಹೃದಯವು ಸಂತೋಷಿಸುವದು, ನಿಮ್ಮ ಎಲುಬು ಗಳು ಹಸಿರು ಪಲ್ಯದ ಹಾಗೆ ಚಿಗುರುವವು; ಕರ್ತನ ಕೈ ಆತನ ಸೇವಕನ ಕಡೆಗೂ ಆತನ ರೌದ್ರವು ಆತನ ಶತ್ರುಗಳ ಕಡೆಗೂ ಕಾಣಬರುವದು.

ಯೆರೆಮಿಯ 15:16 ನಿನ್ನ ವಾಕ್ಯಗಳು ಸಿಕ್ಕಿದವು, ಅವುಗಳನ್ನು ತಿಂದೆನು. ನಿನ್ನ ವಾಕ್ಯವು ನನ್ನ ಹೃದಯಕ್ಕೆ ಉಲ್ಲಾಸವೂ ಸಂತೋಷವೂ ಆಗಿತ್ತು; ಓ ಸೈನ್ಯಗಳ ದೇವರಾದ ಕರ್ತನೇ, ನಿನ್ನ ಹೆಸರಿನಿಂದ ಕರೆಯಲ್ಪಟ್ಟಿದ್ದೇನೆ.

ಯೆರೆಮಿಯ 24:7 ನಾನೇ ಕರ್ತನೆಂದು ನನ್ನನ್ನು ತಿಳುಕೊಳ್ಳುವದಕ್ಕೆ ಅವರಿಗೆ ಹೃದಯವನ್ನು ಕೊಡುವೆನು. ಅವರು ನನ್ನ ಜನರಾಗಿ ರುವರು; ನಾನು ಅವರ ದೇವರಾಗಿರುವೆನು; ತಮ್ಮ ಪೂರ್ಣ ಹೃದಯದಿಂದ ನನ್ನ ಬಳಿಗೆ ಹಿಂತಿರುಗಿಕೊಳ್ಳು ವರು.

ಯೋಹಾನನು 14:1 ನಿಮ್ಮ ಹೃದಯವು ಕಳವಳಗೊಳ್ಳದೆ ಇರಲಿ; ನೀವು ದೇವರನ್ನು ನಂಬಿರಿ, ನನ್ನನ್ನೂ ನಂಬಿರಿ.

ಯೋಹಾನನು 14:27 ನಾನು ನಿಮಗೆ ಸಮಾಧಾನವನ್ನು ಬಿಟ್ಟು ಹೋಗುತ್ತೇನೆ, ನನ್ನ

ಸಮಾಧಾನವನ್ನು ನಾನು ನಿಮಗೆ ಕೊಡುತ್ತೇನೆ; ಲೋಕವು ಕೊಡುವ ರೀತಿಯಲ್ಲಿ ನಾನು ನಿಮಗೆ ಕೊಡುವದಿಲ್ಲ, ನಿಮ್ಮ ಹೃದಯವು ಕಳವಳಗೊಳ್ಳ ದಿರಲಿ ಇಲ್ಲವೆ ಅಂಜದಿರಲಿ.

ಯೋಹಾನನು 16:6 ಆದರೆ ಇವುಗಳನ್ನು ನಾನು ನಿಮಗೆ ಹೇಳಿದ್ದರಿಂದ ನಿಮ್ಮ ಹೃದಯದಲ್ಲಿ ದುಃಖವು ತುಂಬಿಯದೆ.

ಯೋಹಾನನು 16:22 ಆದದರಿಂದ ಈಗ ನಿಮಗೆ ದುಃಖವುಂಟು; ಆದರೆ ನಾನು ನಿಮ್ಮನ್ನು ತಿರಿಗಿ ನೋಡುವೆನು; ಆಗ ನಿಮ್ಮ ಹೃದಯವು ಉಲ್ಲಾಸಿಸುವದು; ನಿಮ್ಮ ಆನಂದವನ್ನು ನಿಮ್ಮಿಂದ ಯಾರೂ ತೆಗೆಯುವದಿಲ್ಲ.

ಅಪೊಸ್ತಲರ ಕೃತ್ಯಗ 2:46 ಅವರು ದೇವಾಲಯದಲ್ಲಿ ಪ್ರತಿ ದಿನ ಒಮ್ಮನಸ್ಸಿನಿಂದ ಕೂಡುತ್ತಾ ಮನೆಮನೆಗಳಲ್ಲಿ ರೊಟ್ಟಿ ಮುರಿಯುತ್ತಾ ಉಲ್ಲಾಸದಿಂದಲೂ ಏಕಹೃದಯ ದಿಂದಲೂ ಊಟಮಾಡುತ್ತಿದ್ದರು.

ರೋಮಾಪುರದವರಿಗೆ 9:2 ಅದೇನಂದರೆ ನನ್ನ ಹೃದಯದಲ್ಲಿ ದೊಡ್ಡ ಭಾರವೂ ಎಡೆಬಿಡದ ದುಃಖವೂ ಉಂಟು.

2 ಕೊರಿಂಥದವರಿಗೆ 2:4 ನಿಮಗೆ ದುಃಖವಾಗಬೇಕಂತಲ್ಲ, ನಿಮ್ಮ ಮೇಲೆ ನನಗಿರುವ ಅಧಿಕವಾದ ಪ್ರೀತಿಯನ್ನು ನೀವು ತಿಳಿದು ಕೊಳ್ಳಬೇಕೆಂತಲೇ ನಾನು ಬಹಳ ಕಣ್ಣೀರಿನಿಂದಲೂ ಹೃದಯದ ಬಹುಸಂಕಟದಿಂದಲೂ ವ್ಯಾಕುಲ ದಿಂದಲೂ ನಿಮಗೆ ಬರೆದೆನು.

ಎಫೆಸದವರಿಗೆ 5:19 ಕೀರ್ತನೆಗಳಿಂದಲೂ ಸಂಗೀತ ಗಳಿಂದಲೂ ಆತ್ಮಸಂಬಂಧವಾದ ಹಾಡುಗಳಿಂದಲೂ ನಿಮಗೆ ನೀವೇ ಮಾತನಾಡಿಕೊಳ್ಳುತ್ತಾ ನಿಮ್ಮ ಹೃದಯದಲ್ಲಿ ಕರ್ತನಿಗೆ ಗಾನಮಾಡುತ್ತಾ ಇಂಪಾಗಿ ಹಾಡುತ್ತಾ ಇರ್ರಿ.

**Pastor T. John Franklin**
**Church of Salvation, Healing, and Deliverance**
**COS-HAD.org**